ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 22ನೇ ಸೆಪ್ಟಂಬರ್, 2020

ದಕ್ಷಿಣ ಕನ್ನಡ ಸಹಕಾರಿ ಸಕ್ಕರೆ ಕಾರ್ಖಾನೆ ಬ್ರಹ್ಮಾವರ ಇದರ ಪುನಃಶ್ಚೇತನದ ಕುರಿತು

ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ (ನಾಮನಿರ್ದೇಶನ ಹೊಂದಿದವರು):-

190 (210) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ದಕ್ಷಿಣ ಕನ್ನಡ ಸಹಕಾರಿ ಸಕ್ಕರೆ ಕಾರ್ಖಾನೆ, ಬ್ರಹ್ಮಾವರ ಪ್ರಾರಂಭವಾದ ದಿನಾಂಕದಿಂದ ಈ ದಿನಾಂಕದವರೆಗೂ ನಡೆದ ಆಡಳಿತ ಮಂಡಳಿಯ ಚುನಾವಣೆಗಳ ಸಂಖ್ಯೆ ಎಷ್ಟು ; ಈ ಚುನಾವಣೆಗಳಲ್ಲಿ ಮತದಾನ ಮಾಡಲು ಅರ್ಹತೆಯನ್ನು ಹೊಂದಿರುವ ಸದಸ್ಯರ ಸಂಖ್ಯೆ ಎಷ್ಟು ; (ಚುನಾವಣಾವಾರು ವಿವರ ನೀಡುವುದು)

(ಆ) ಮತದಾನಕ್ಕೆ ಅರ್ಹತೆಯನ್ನು ಹೊಂದಿರುವ ಸದಸ್ಯರ ಸಂಖ್ಯೆ ಎಷ್ಟು ; (ಪಟ್ಟಿಯನ್ನು ಒದಗಿಸುವುದು)

(ಇ) ಈ ಕಾರ್ಖಾನೆಯಿಂದ ವಿವಿಧ ಲೆಕ್ಕಶೀರ್ಷಿಕೆಯಡಿಯಲ್ಲಿ ಪಾವತಿಗೆ ಬಾಕಿಯಿರುವ ಹಣವೆಷ್ಟು ; ಈ ಕಾರ್ಖಾನೆಯು ನಿಲುಗಡೆಯಾದ ದಿನಾಂಕದಿಂದ ಇಲ್ಲಿಯವರೆಗೆ ವಿವಿಧ ಶೀರ್ಷಿಕೆಯಲ್ಲಿ ಖರ್ಚಾದ ವೆಚ್ಚ ಮತ್ತು ಸಂಗ್ರಹಿಸಿದ ಆದಾಯವೆಷ್ಟು ; (ಲೆಕ್ಕ ಶೀರ್ಷಿಕೆವಾರು ಮಾಹಿತಿಯನ್ನು ಒದಗಿಸುವುದು)

(ಈ) ಈ ಕಾರ್ಖಾನೆಯನ್ನು ಪುನಃಶ್ಚೇತನಗೊಳಿಸುವ ಯೋಜನೆ ಸರ್ಕಾರದ ಮುಂದಿದೆಯೇ ; ಇಲ್ಲವಾದಲ್ಲಿ, ಕಾರ್ಖಾನೆಯ ಅಧೀನದಲ್ಲಿರುವ 110 ಎಕರೆ ವಿಸ್ತೀರ್ಣ ಹೊಂದಿರುವ ಕೃಷಿ ಜಮೀನನ್ನು ಕೃಷಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಕೃಷಿ ಮತ್ತು ತೋಟಗಾರಿಕಾ ವಿಶ್ವವಿದ್ಯಾನಿಲಯಗಳಿಗೆ ಹಸ್ತಾಂತರಿಸುವ ಯೋಜನೆ ಸರ್ಕಾರದ ಮುಂದಿದೆಯೇ ?